ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ,
ಶ್ರೀರಂಗಪಟ್ಟಣ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ **: 22/2019**

ಚಾ.ಸಾ. **:- 18**
ಪ್ರಾ.ಸಾ. **:- 07**

| | | |
|---|---|---|
| ಹೆಸರು | : | ಟಿ.ಎಂ.ಪುನೀತ್ |
| ತಂದೆಯ ಹೆಸರು | : | ಜಿ.ಮಂಜುನಾಥ್ |
| ವಯಸ್ಸು | : | 43 ವರ್ಷ |
| ಉದ್ಯೋಗ | : | ಪಿ.ಐ., ಬಿಳಿಕೆರೆ ಪೊಲೀಸ್ ಠಾಣೆ |
| ವಾಸಸ್ಥಳ | : | ಮೈಸೂರು. |

---

ಪ್ರಮಾಣೀಕರಿಸಲಾದ ದಿನಾಂಕಃ- **09.02.2026.**

<u>ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :</u>

ನಾನು ದಿನಾಂಕಃ 01.04.2021 ರಿಂದ 23.07.2022 ರ ಅವಧಿಯಲ್ಲಿ ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಪಿ.ಐ.ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 21.11.2018 ರಂದು ನಾನು ಠಾಣೆಯಲ್ಲಿ ಕರ್ತವ್ಯದಲ್ಲಿದ್ದಾಗ ಚಾ.ಸಾ-1 ರವರು ನೀಡಿದ ಲಿಖಿತ ದೂರನ್ನು ಪಡೆದುಕೊಂಡು ಪ್ರಕರಣವನ್ನು ದಾಖಲು ಮಾಡಿಕೊಂಡು, ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ದೂರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-17 ಎಂದು ಸಾಕ್ಷಿಯ ಸಹಿಯನ್ನು ನಿಪಿ-17(ಎ) ಎಂದು ಗುರುತಿಸಲಾಯಿತು.

ನಂತರ, ಪ್ರಕರಣದ ಕಡತವನ್ನು ಪ್ರಕರಣದ ದಿನಚರಿಯೊಂದಿಗೆ ಚಾಸಾ-19 ರವರು ಪಡೆದುಕೊಂಡಿರುತ್ತಾರೆ.

<u>ಪಾಟೀ ಸವಾಲು **:** ಆರೋಪಿ ಪರ ವಕೀಲರಿಂದ **:**</u>

ಆ ದಿನ ಬೆಳಿಗ್ಗೆ ಸುಮಾರು 7.30 ರ ಸಮಯಕ್ಕೆ ನಾನು ಠಾಣೆಗೆ ಬಂದಿರುತ್ತೇನೆ. ದೂರುದಾರರ ಜೊತೆ ಯಾರು ಬಂದಿರುತ್ತಾರೆಂದು ನನಗೆ ನೆನಪಿಲ್ಲ. ದೂರನ್ನು ಮೊದಲೇ ತಯಾರು ಮಾಡಿಕೊಂಡು ತಂದಿದ್ದರು, ನನ್ನ ಸಮಕ್ಷಮ ಅದಕ್ಕೆ ರುಜು ಮಾಡಿಲ್ಲ. ದೂರುದಾರರಿಗೆ ಕನ್ನಡ ಬರುತ್ತದೆಯೇ, ಇಲ್ಲವೋ ಎಂದು ನಮೂದು ಮಾಡಿಲ್ಲ. ಆರೋಪಿ ತಪ್ಪಿನಿಂದ ಅಪಘಾತವಾಗದೇ ಇದ್ದರೂ ದೂರುದಾರರ ಕುಟುಂಬಕ್ಕೆ ಸಹಾಯ ಮಾಡಲು ಸುಳ್ಳು ದೂರಿನ ಆಧಾರದ ಮೇಲೆ ಸುಳ್ಳು ಪ್ರಕರಣವನ್ನು ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ದೂರುದಾರರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ **:-**</u> ಇಲ್ಲ**.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

ಪ್ರಧಾನ ಹಿರಿಯ ಸಿಜೆ ಮತ್ತು
ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.

**ಸಾಕ್ಷಿದಾರರ ಸಹಿ.**